# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 15-03-2021 ಪ್ರಶ್ನೆ ಸಂಖ್ಯೆ : 997(1169)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಮರಿತಿಬ್ಬೇಗೌಡ(ಶಿಕ್ಷಕರ ಕ್ಷೇತ್ರ )

ಉತ್ತರ ನೀಡಬೇಕಾದ ದಿನಾಂಕ : 15-03-2021

ಉತ್ತರಿಸುವ ಸಚಿವರು: ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ವಿಷಯ : ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ ಪ್ರಾಂಶುಪಾಲರು ಮತ್ತು ಉಪ ಪ್ರಾಂಶುಪಾಲರ ಕರ್ತವ್ಯ ಹಂಚಿಕೆ ಬಗ್ಗೆ

(ಅ) ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪ್ರಾಂಶುಪಾಲರು ಮತ್ತು ಉಪ ಪ್ರಾಂಶುಪಾಲರ ನಡುವೆ ಕರ್ತವ್ಯ ಹಂಚಿಕೆಯಲ್ಲಿನ ತಾರತಮ್ಯದಿಂದ ಪ್ರೌಢಶಾಲೆ ಹಾಗೂ ಪ್ರಾಥಮಿಕ ಶಾಲೆಯ ಶೈಕ್ಷಣಿಕ ಗುಣಮಟ್ಟಕ್ಕೆ ಅಡ್ಡಿ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಉಪ ಪ್ರಾಂಶುಪಾಲರಿಗೆ ಪ್ರೌಢ ಶಾಲಾ ಹಾಗೂ ಪ್ರಾಥಮಿಕ ಶಾಲಾ ವಿಭಾಗದ ವೇತನ ಸೆಳೆಯುವ ಹಾಗೂ ಆಡಳಿತಾತ್ಮಕ ಎಲ್ಲಾ ಜವಾಬ್ದಾರಿಗಳನ್ನು ಸರ್ಕಾರಿ ಪ್ರೌಢ ಶಾಲೆಗಳಲ್ಲಿರುವಂತೆ ನೀಡಲು ಇರುವ ತೊಂದರೆಗಳೇನು;

(ಇ) ಸದರಿ ಕರ್ತವ್ಯ ನಿರ್ವಹಣೆಯ ಜವಾಬ್ದಾರಿಯ ಲೋಪದೋಷವನ್ನು ಸರಿಪಡಿಸಲು ಯಾವ ಕಾಲಮಿತಿಯಲ್ಲಿ ಸರ್ಕಾರ ಕ್ರಮ ಕೈಗೊಳ್ಳಲಾಗುವುದು?